2. ಗುತ್ತಿಗೆ ಆಧಾರದ ಮೇಲೆ ನೇಮಿಸುವ ಮೂಲಕ

3. ನೇರ ನೇಮಕಾತಿ ಮೂಲಕ ನೇಮಿಸಲು ಸಂದರ್ಶನ ಪ್ರಕ್ರಿಯೆಯಲ್ಲಿದೆ.

4. ಬಡ್ತಿ ನೀಡುವ ಮೂಲಕ

5. ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

STAFF POSITION OF GROUP 'A', 'B', 'C' AND 'D' OF THE DIRECTORATE OF HEALTH & FAMILY WELFARE SERVICES AS ON 31.3.1997

ABSTRACT

CATEGORY	SANCTIONED	WORKING	VACANT
GROUP 'A'	5027	4197	830
GROUP 'B'	493	353	140
GROUP 'C'	37551	29539	8012
GROUP 'D'	15653	14727	926
TOTAL	58724	48816	9908

ವಿಷಯ: ರಾಜ್ಯದಲ್ಲಿನ ನಗರ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ.

1000 (1640)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ರಾಜ್ಯದ ನಗರ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಆ) ಇದ್ದಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು?

ಇ) ಈ ಯೋಜನೆಯನ್ನು ಜಿಲ್ಲಾ ಕೇಂದ್ರಗಳಿಗೂ ವಿಸ್ತರಿಸುವ ಉದ್ದೇಶ ಸರ್ಕಾರದ ಮುಂದಿದೆಯೇ?

ಈ) ಇದ್ದರೆ ಎಂದಿನಿಂದ ಪ್ರಾರಂಭಿಸಲಾಗುವುದು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇದೆ.

ಆ) 1997-98ನೇ ಸಾಲಿನಿಂದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲಾಗುತ್ತಿದೆ.

ಇ) ಇದೆ.

ಈ) ''ಆ''ಗೆ ನೀಡಿದ ಉತ್ತರ ಇದಕ್ಕೂ ಅನ್ವಯಿಸುತ್ತದೆ.

ವಿಷಯ: ದಶಲಕ್ಷ ಬಾವಿ ಯೋಜನೆಯ ಪ್ರಗತಿ

1001 (1642)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) 1997-98ನೇ ಸಾಲಿನಲ್ಲಿ ದಶಲಕ್ಷ ಬಾವಿ ಯೋಜನೆಯಡಿಯಲ್ಲಿ ಮೀಸಲಿಟ್ಟ ಹಣವೆಷ್ಟು?

ಆ) ಈ ಯೋಜನೆಯಲ್ಲಿ ಎಷ್ಟು ಬಾವಿಗಳನ್ನು ನಿರ್ಮಿಸಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

ಇ) 1997-98ನೇ ಸಾಲಿನಲ್ಲಿ ಹೊಂದಿದ ಗುರಿ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

ಈ) ಗುರಿ ಸಾಧಿಸಲಾಗದಿದ್ದರೆ ಕಾರಣಗಳೇನು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) 1997-98ನೇ ಸಾಲಿನಲ್ಲಿ ದಶಲಕ್ಷ ಬಾವಿ ಯೋಜನೆಯಡಿಯಲ್ಲಿ ಮೀಸಲಿಟ್ಟ